

ಅರುಣ ಪಿ. ಭಟ್ಟ

# ವಾರಭವಿಷ್ಯ: 4.3.2021ರಿಂದ 10.3.2021ರವರೆಗೆ




ಹೊಸ ಕೆಲಸಗಳಿಗೆ ಪ್ರಯತ್ನಿಸಲು ಸೂಕ್ತ ಕಾಲ. ಉದ್ಯೋಗದಲ್ಲಿ ಅದ್ಭುತ ಯಶಸ್ಸಿನೊಂದಿಗೆ ವಾರದ ಆರಂಭ. ಕಲೆ, ತಂತ್ರಜ್ಞಾನದಂತಹ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ. ಮಕ್ಕಳ ಬಗ್ಗೆ ಗಮನ ಹಾಗೂ ಅವರ ಪರಿಸರವನ್ನು ಉತ್ತಮಗೊಳಿಸುವುದು ಒಳ್ಳೆಯದು. ಶುಭದಿನ 8. ಗೋಪೂಜೆ ಮಾಡಿರಿ. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಉತ್ತಮ ಫಲಿತಾಂಶ ಸಿಗಲಿದೆ. ವಾರದ ಆರಂಭದಲ್ಲಿ ಮನೆಯಲ್ಲಿ ಹಾಗೂ ಕುಟುಂಬದಲ್ಲಿ ಸಂತೋಷವಾಗಿ ಇರುವುದರಿಂದ ನಿಮ್ಮ ಮನಸು ಕೂಡ ಸಮಾಧಾನವಾಗಿ ಇರುತ್ತದೆ. ಉದ್ಯೋಗದಲ್ಲಿ ಯಶಸ್ಸು ನಿಮ್ಮಮನೆಯ ಬಾಗಿಲು ಬಡಿಯುತ್ತದೆ. ಹೊಸದಾಗಿ ಉದ್ಯೋಗಕ್ಕೆ ಪ್ರಯತ್ನಿಸುತ್ತಿರುವವರು ಹೆಚ್ಚು ಶ್ರಮ ಹಾಕಬೇಕಾಗುತ್ತದೆ. ಶುಭದಿನ 6. ಹನುಮಾನ್ ಚಾಲಿಸ್ ಪಠಿಸಿರಿ.




ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ, ಆದಷ್ಟು ಅವರನ್ನು ಸರಿಪಡಿಸಲು ಯೋಜನೆ ರೂಪಿಸಬೇಕಾದ ಅನಿವಾರ್ಯತೆ ಕಂಡುಬರುತ್ತದೆ. ಶುಭದಿನ 9. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಮಾಡುವ ಕಾರ್ಯದಲ್ಲಿ ಅನಗತ್ಯ ತೊಂದರೆ ಬರಬಹುದು. ಆದಷ್ಟು ಸಮಸ್ಯೆ ಪರಿಹಾರ ಹುಡುಕಿ ಮತ್ತು ಕೆಲವು ಕಾರ್ಯಗಳನ್ನು ನೀವೇ ಸ್ವತಃ ನಿಂತು ಮಾಡುವುದು ಒಳಿತು. ಬರುವಂತ ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆ ಕಂಡುಬರುತ್ತದೆ. ಕಾನೂನು ವ್ಯಾಜ್ಯಗಳು, ವಾದ ಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ ಮಾಡುತ್ತೀರಿ. ಶುಭದಿನ 10. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವೇಚನಾರಹಿತ ಹೂಡಿಕೆಗಳಿಂದ ನಷ್ಟ ಆಗುವ ಸಂಭವವಿದೆ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದವು ಅತಿಶಯೋಕ್ತಿಯಾಗಿ ಕಾಣಬಹುದು. ಎಲ್ಲರ ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲಗಳು ಕಾಣಸಿಗಲಿದೆ. ಉತ್ಸಾಹ ಮಾಮೂಲಿಗಿಂತ ಹೆಚ್ಚಾಗಿ ಇರುತ್ತದೆ. ಶುಭದಿನ 5. ವಿಷ್ಣು ಸಹಸ್ರನಾಮ ಓದಿರಿ.




ಕೆಲಸದ ವಿಳಂಬದಿಂದ ನಿಮ್ಮ ಬಗ್ಗೆ ಹಲವರು ಮಾತುಗಳನ್ನಾಡುವರು. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಕಂಡುಬರುತ್ತದೆ. ವ್ಯಾಪಾರ ವ್ಯವಹಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಆದರೆ ಅದರ ಸಲುವಾಗಿಯೂ ಪ್ರಯಾಣ ಮಾಡುವ ಅಗತ್ಯ ಕಂಡುಬರುತ್ತದೆ. ಶುಭದಿನ 9. ನವದುರ್ಗಾ ಆರಾಧನೆ ಮಾಡಿರಿ.




ಹಿರಿಯರಿಗೆ ಗೌರವ ನೀಡುವುದು ಒಳ್ಳೆಯದು. ಮನಸ್ಸು ಮರ್ಕಟ ವಿದ್ದಂತೆ ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆಗಳು ಕಂಡುಬರುತ್ತದೆ. ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ದೊಡ್ಡ ಮಟ್ಟದಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಹುಡುಕಿಕೊಂಡು ಬರಲಿದೆ. ಸಂತೋಷ ಕಾಣಿಸಿಕೊಳ್ಳುತ್ತದೆ. ಶುಭದಿನ 8. ಆದಿತ್ಯ ಹೃದಯ ಪಠಿಸಿರಿ.




ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗಳಲ್ಲಿ ಹೋಗದಿರುವುದು ಸೂಕ್ತ. ಸಂಗಾತಿಯ ಜೊತೆಗೆ ಖರೀದಿ ಪ್ರಕ್ರಿಯೆಗಳನ್ನು ಮಾಡಲು ಇಚ್ಛಿಸುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಬಹುಮಾನ ಅಥವಾ ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುವವರು ಶ್ರಮ ಹೆಚ್ಚಿಸಬೇಕು. ಶುಭದಿನ 10. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಕುಟುಂಬ ಸದಸ್ಯರು ಹಾಗೂ ಸಂಬಂಧಿಕರ ಜತೆಗೆ ಸೌಹಾರ್ದ ಬಾಂಧವ್ಯ ಇರುತ್ತದೆ. ಶುಭದಿನ 9. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ಹೊಸ ಯೋಜನೆಗೆ ಈಗಿನಿಂದಲೇ ಸಿದ್ಧತೆ ನಡೆಸುವುದು ಒಳ್ಳೆಯದು. ಕೃಷಿ ಚಟುವಟಿಕೆಗಳಲ್ಲಿ ಉತ್ತಮವಾದ ಬೆಳವಣಿಗೆ ಕಂಡುಬರುತ್ತದೆ. ಆರ್ಥಿಕ ಸಹಕಾರಕ್ಕಾಗಿ ಆತ್ಮೀಯರ ಬಳಿ ಕೇಳುವ ಸಾಧ್ಯತೆ ಇದೆ. ಭೂ ವಿಷಯದಲ್ಲಿ ಉತ್ತಮ ವ್ಯವಹಾರ ನಡೆಸುವ ಸಾಧ್ಯತೆ ಕಂಡುಬರುತ್ತದೆ. ವಾರದ ಶುರುವಿನಲ್ಲಿ ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ಶುಭದಿನ 8. ಕಾಲಭೈರವನ ಸೇವೆ ಮಾಡಿರಿ.




ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಕುಟುಂಬದಲ್ಲಿ ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ಸಮಸ್ಯೆಗಳ ಸುಳಿವಿನಿಂದ ಹೊರಬರುವ ಪ್ರಯತ್ನ ಮೆಚ್ಚುವಂತದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ದೈಹಿಕ ಸದೃಢತೆ ಬಗ್ಗೆ ಹೆಚ್ಚಿನ ಗಮನ ನೀಡುವ ಸಾಧ್ಯತೆ ಇದೆ. ಶುಭದಿನ 9. ಶನಿಸ್ತೋತ್ರ ಪಠಿಸಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿವೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತವೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ. ಯಶಸ್ವಿ ನಿರ್ಣಯಗಳಿಂದ ಸ್ಥಾನ ಗಟ್ಟಿಗೊಳಿಸಿಕೊಳ್ಳುವಿರಿ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ನಿಮ್ಮ ಶ್ರಮ ಸಾರ್ಥಕವಾಗುತ್ತದೆ. ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿರಿ.